ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1012 (776)
ಸದಸ್ಯರ ಹೆಸರು	:	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	10.03.2021.
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು ಲೋಕೋಪಯೋಗಿ ಇಲಾಖೆ

.ಸಂ	ಪ್ರಶ್ನೆ	ಉತ್ತರ
ಅ)	ಪುಣೆ – ಬೆಂಗಳೂರು ಹೆದ್ದಾರಿಯಲ್ಲಿ ಬರುವ ಟೋಲ್ ನಾಕಾಗಳ ಸಂಖ್ಯೆ ಎಷ್ಟು; ಈ ಟೋಲ್ ನಾಕಾಗಳನ್ನು ಎಷ್ಟು ವರ್ಷಗಳ ವರೆಗೆ ಗುತ್ತಿಗೆಗೆ ಕೊಡಲಾಗಿದೆ;	ಪುಣೆ – ಬೆಂಗಳೂರು ರಾಷ್ಟ್ರೀಯ ಹೆದ್ದಾರಿ –4 ರ ಮೇಲೆ ಒಟ್ಟು 18 ಟೋಲ್‌ಪ್ಲಾಜಾಗಳಿವೆ. ಇವುಗಳಲ್ಲಿ 12 ಟೋಲ್‌ಪ್ಲಾಜಾಗಳು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಯಲ್ಲಿದ್ದು, ಉಳಿದ 06 ರಾಷ್ಟ್ರೀಯ ಹೆದ್ದಾರಿ ವಲಯದ ವ್ಯಾಪ್ತಿಯಲ್ಲಿವೆ. ಈ ಟೋಲ್ ಪ್ಲಾಜಾಗಳಲ್ಲಿ ಶುಲ್ಕ ವಸೂಲಾತಿಗಾಗಿ ಗುತ್ತಿಗೆದಾರರೊಡನೆ ಮಾಡಿಕೊಂಡಿರುವ ಒಪ್ಪಂದದ ವಿವರಗಳನ್ನು ಅನುಬಂಧ–1 ಮತ್ತು 2 ರಲ್ಲಿ ನೀಡಲಾಗಿದೆ.
ಆ)	ಈ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಸರ್ವೀಸ್ ರಸ್ತೆಗಳನ್ನು ಯಾರು ನಿರ್ವಹಣೆ ಮಾಡುತ್ತಾರೆ;	ಈ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಸರ್ವೀಸ್ ರಸ್ತೆಗಳನ್ನು ಆಯಾಯಾ ಗುತ್ತಿಗೆದಾರರ ಮುಖಾಂತರ ನಿರ್ವಹಣೆ ಮಾಡುತ್ತಿರುವುದಾಗಿ ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ.
ಇ)	ಸದರಿ ಹೆದ್ದಾರಿಯ ಬಹಳಷ್ಟು ಕಡೆಗಳಲ್ಲಿ ಸರ್ವೀಸ್ ರಸ್ತೆಗಳು ತೀರಾ ಅಸ್ತವ್ಯಸ್ತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ರಸ್ತೆಗಳ ದುರಸ್ತಿಯ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು?	ಮುಖ್ಯ ಕಾಮಗಾರಿಯಲ್ಲಿ ಬರುವ ಕೆಳಸೇತುವೆ ಕಾಮಗಾರಿಗಳು ಪ್ರಗತಿಯಲ್ಲಿರುವ ಸ್ಥಳಗಳಲ್ಲಿ ಸಂಚಾರಕ್ಕೆ ತಾತ್ಕಾಲಿಕ ತಿರುವು ರಸ್ತೆಗಳನ್ನು ಹೊರತುಪಡಿಸಿ, ಉಳಿದಂತೆ ಈ ಹೆದ್ದಾರಿಯಲ್ಲಿ ಬರುವ ಸರ್ವೀಸ್ ರಸ್ತೆಗಳು ಸಂಚಾರಕ್ಕೆ ಯೋಗ್ಯವಾಗಿವೆ. ಹಾಳಾಗಿರುವ ಸರ್ವೀಸ್ ರಸ್ತೆಗಳನ್ನು, ಆಯಾಯಾ ಗುತ್ತಿಗೆದಾರರು ದುರಸ್ತಿಪಡಿಸುತ್ತಿದ್ದಾರೆ ಎಂದು ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ.

ಕಡತ ಸಂಖ್ಯೆ: ಲೋಇ 80 ಸಿಎನ್‌ಹೆಚ್ 2021 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿ,
ಲೋಕೋಪಯೋಗಿ ಇಲಾಖೆ